# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)/ಪಿ.ಆರ್/174 /2022-23 ದಿನಾಂಕ : 5-12-2022

ದಿನಾಂಕ: 03-12-2022 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ:174 ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ಪಿ.ಲಿಂಗರಾಜೇಗೌಡ | ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ:143 ಹೊಸ ಸಂಖ್ಯೆ: 174 | 9480688143 |
| 3 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 4 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 5 | ವಿ.ವಿ.ಪುರಂ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | |
| 6 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 7 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |
| 8 | ಪಾರ್ವತಿಪುರ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | |
| 9 | ಶ್ರೀ.ಎನ್. ಹೇಮಂತಕುಮಾರ್ | ಸ.ಅ(ವಿ) ಬೆಂ.ವಿ.ಕಂ | 9449870535 |
| 10 | ಶ್ರೀ.ನರಸಿಂಹ | ಕಿರಿಯ ಆರೋಗ್ಯ ಪರಿವೀಕ್ಷಕರು | 8660658637 |
| 11 | ಶ್ರೀ. ಸುರೇಶ | Animal Husbandary | 9480685329 |

ದಿನಾಂಕ 03-12-2022 ರಂದು ನಡೆದ ವಾರ್ಡ್ -174 ರ ಸಮಿತಿ ಸಭೆಯ ನಡಾವಳಿಗಳು:-

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರುಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ಮು.ತಿ.ನೋ

ಮೊದಲಿಗೆ ಸಭೆಯಲ್ಲಿ ಹಾಜರಿದ್ದ ಶ್ರೀ.ಬಿ.ಎನ್.ಮಣಿ ರವರು ಮಾತನಾಡಿ ಕವಿಲಕ್ಷ್ಮೀಶ ರಸ್ತೆಯಲ್ಲಿ ಆರ್.ಸಿ.ಸಿ.ಚರಂಡಿಯ ಕಾಮಗಾರಿ ನಡೆಯುತ್ತಿದ್ದು ಮಳೆ ನೀರು ಹರಿಯಲು ಶೋಲ್ಡರ್ಸ್‌ಗಳನ್ನು ಸಮರ್ಪಕವಾಗಿ ನಿರ್ಮಿಸಿರುವುದಿಲ್ಲ ಹಾಗೂ ಗ್ರೇಟಿಂಗ್ಸ್‌ಗಳನ್ನು ಅಳವಡಿಸಿಲ್ಲವೆಂದು ಸಭೆಯಲ್ಲಿ ತಿಳಿಸಿದರು. ಈ ವಿಷಯವಾಗಿ ಮಾನ್ಯ ನೋಡಲ್ ಅಧಿಕಾರಿಗಳು ಮಾತನಾಡುತ್ತಾ ಸದರಿ ಕಾಮಗಾರಿಯು ಮೇಜರ್ ರೋಡ್ಸ್ ವಿಭಾಗದಿಂದ ಕೈಗೊಂಡಿದ್ದು ಶೋಲ್ಡರ್ಸ್‌ಗಳನ್ನು ಸರಿಯಾದ ರೀತಿಯಲ್ಲಿ ನಿರ್ಮಿಸಿ ಗ್ರೇಟಿಂಗ್ಸ್‌ಗಳನ್ನು ಅಳವಡಿಸುವಂತೆ ಸಂಬಂಧಪಟ್ಟ ಅಧಿಕಾರಿಗಳನ್ನು ಕೋರುವುದಾಗಿ ಸಭೆಗೆ ತಿಳಿಸಿದರು.3

ನಂತರ ಮತ್ತೆ ಮಾತು ಮುಂದುವರೆಸಿದ ಶ್ರೀ.ಬಿ.ಎನ್.ಮಣಿರವರು ವಿ.ವಿ.ಪುರಂನ ಮಾರ್ಕೆಟ್ ರಸ್ತೆ ಯಲ್ಲಿ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳುವುದಾಗಿ ಪ್ರತಿಕಾ ಪ್ರಕಟಣೆ ಹೊರಡಿಸಿದ್ದು, ಈ ಕಾಮಗಾರಿಗೆ ಸಂಬಂಧಿಸಿದ ವಿವರಗಳನ್ನು ಒದಗಿಸುವಂತೆ ಕೋರಿದರು. ಮಾನ್ಯ ನೋಡಲ್ ಅಧಿಕಾರಿಗಳು ಸದರಿ ವಿಷಯದ ಬಗ್ಗೆ ಯೋಜನೆ ವಿಭಾಗದ ಅಧಿಕಾರಿಗಳಿಂದ ಮಾಹಿತಿಯನ್ನು ಪಡೆದು ನಂತರ ನೀಡುವುದಾಗಿ ತಿಳಿಸಿದರು. ಪುನಃ ಮಣಿ ರವರು ಮಾತನಾಡುತ್ತಾ ಸಭೆಗೆ ಕಂದಾಯ ಇಲಾಖೆ ಅಧಿಕಾರಿಗಳು ಹಾಜರಿ ಇಲ್ಲದ ಕಾರಣ ಸದರಿ ಇಲಾಖೆ ಅಧಿಕಾರಿಗಳಿಂದ ವಿವರಗಳನ್ನು ಪಡೆದು ತಿಳಿಸುವುದಾಗಿ ಸಭೆಗೆ ತಿಳಿಸಿದರು.

. ನಂತರ ರಾಮಯ್ಯಂಗಾರ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ ಶ್ರೀ. ಓ.ವಿ.ಜಯಕುಮಾರ್ ರವರು ಮಾತನಾಡಿ ವಾರ್ಡ್‌ನಲ್ಲಿ ಹಸಿಕಸ ಮತ್ತು ಒಣಕಸವನ್ನು ವಿಂಗಡಿಸಿ ಪಡೆಯುತ್ತಿಲ್ಲವಾದುದರಿಂದ ಸಮರ್ಪಕವಾಗಿ ಕಸ ವಿಲೇವಾರಿಯಾಗುತ್ತಿಲ್ಲ ಎಂದು ಸಭೆಗೆ ತಿಳಿಸಿದರು. ಈ ವಿಷಯಕ್ಕೆ ಸಂಬಂಧಸಿದಂತೆ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಉತ್ತರಿಸುವಂತೆ ಮಾನ್ಯ ನೋಡಲ್ ಅಧಿಕಾರಿಗಳು ಸೂಚಿಸಿದರು. ಆಗ ಕಿರಿಯ ಆರೋಗ್ಯ ಪರಿವೀಕ್ಷಕರು ಹಸಿಕಸಿ ಮತ್ತು ಒಣಕಸವನ್ನು ವಿಂಗಡಿಸಿ ಪಡೆಯುವ ಟೆಂಡರ್ ಪ್ರಕ್ರಿಯ ಪ್ರಗತಿಯಲ್ಲಿದ್ದು ಟೆಂಡರ್ ದೊರೆತ ನಂತರ ಕ್ರಮ ವಹಿಸುವುದಾಗಿ ತಿಳಿಸಿದರು. ಮತ್ತೆ ಮಾತು ಮುಂದುವರೆಸಿದ ಶ್ರೀ.ಓ.ವಿ. ಜಯಕುಮಾರ್ ರವರು ಬೀಡಾಡಿ ಹಸುಗಳ ಹಾವಳಿ ಹೆಚ್ಚಾಗಿದ್ದು ಕ್ರಮ ವಹಿಸುವಂತೆ ಕೋರಿದರು. ಹಾಗೂ ಕವಿಲಕ್ಷ್ಮೀಶ ರಸ್ತೆಯಲ್ಲಿ ಬೀದಿ ದೀಪಗಳು ಉರಿಯುತ್ತಿಲ್ಲವೆಂದು ಸಭೆಯ ಗಮನಕ್ಕೆ ತಂದರು ಮಾನ್ಯ ನೋಡಲ್ ಅಧಿಕಾರಿಗಳು ಬೀಡಾಡಿ ಹಸುಗಳನ್ನು ಹಿಡಿದು ಮಾಲೀಕರುಗಳಿಗೆ ದಂಡ ವಿಧಿಸುವಂತೆ ಹಾಗೂ ಹಸುಗಳನ್ನು ರಸ್ತೆಗೆ ಬಿಡದಂತೆ ಮಾಲೀಕರಿಗಳಿಗೆ ಸೂಚಿಸುವಂತೆ ಸಭೆಯಲ್ಲಿ ಹಾಜರಿದ್ದ ಪಶುಸಂಗೋಪನಾ ಇಲಾಖೆ ಅಧಿಕಾರಿಗಳಾದ ಶ್ರೀ. ಸುರೇಶ್ ರವರಿಗೆ ಸೂಚಿಸಿದರು, ಹಾಗೂ ಬೀದಿ ದೀಪಗಳ ಬಗ್ಗೆ ಮೊಬೈಲ್ ದೂರವಾಣೆ ಮುಖಾಂತರ ಬೀದಿ ದೀಪಗಳ ವಿಭಾಗದ ಅಧಿಕಾರಿಗಳನ್ನು ಸೂಕ್ತ ಕ್ರಮಕ್ಕೈಗೊಳ್ಳುವಂತೆ ಸೂಚಿಸಿದರು.

ನಂತರ ಪಾರ್ವತಿಪುರ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ ಶ್ರೀ. ಮಧು ರವರು ಮಾತನಾಡಿ ಸಜನ್‌ರಾವ್ ವೃತ್ತ, ಸಜ್ಜನ್‌ರಾವ್ ರಸ್ತೆ, ಪಾರ್ವತಿಪುರಂನ ಮುಖ್ಯ ದ್ವಾರಗಳಲ್ಲಿರುವ ಹೈ ಮಾಸ್ಕ್ ವಿದ್ಯುತ್ ದೀಪಗಳು ಉರಿಯುತ್ತಿಲ್ಲ ಹಾಗೂ ಪಾರ್ವತಿಪುರಂನಲ್ಲಿನ ಗಲ್ಲಿ ಗಲ್ಲಿಗಳಲ್ಲಿರುವ ಮ್ಯಾನ್ ಹೋಲ್‌ಗಳನ್ನು ಸರಿಪಡಿಸುವಂತೆ ಕೋರಿದರು, ಮಾನ್ಯ ನೋಡಲ್ ಅಧಿಕಾರಿಗಳು ಸದರಿ ವಿಷಯಗಳ ಬಗ್ಗೆ ಸೂಕ್ತ ಕ್ರಮಕ್ಕೈಗೊಳ್ಳುವಂತೆ ಬೀದಿ ದೀಪಗಳು ವಿಭಾಗದ ಅಧಿಕಾರಿಗಳು ಹಾಗೂ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳನ್ನು ಸಂಪರ್ಕಿಸಿ ಸೂಚಿಸುವುದಾಗಿ ಸಭೆಗೆ ತಿಳಿಸಿದರು.

ಪು.ತಿ.ನೋ

ಎಂ.ಎಂ.ಪಿ. ರಸ್ತೆಯ ಶ್ರೀ. ವೆಂಕಟೇಶ್ ರವರು ಮೊಬೈಲ್ ದೂರವಾಣಿ ಮುಖಾಂತರ ಮಾತನಾಡಿ ನ್ಯಾಷನಲ್ ಹೈ ಸ್ಕೂಲ್ ರಸ್ತೆಯಲ್ಲಿ ರಸ್ತೆ ಉಬ್ಬು (Road Hump) ಗಳನ್ನು ನಿರ್ಮಿಸುವಂತೆ ಮತ್ತು ವಾಸವಿ ದೇವಸ್ಥಾನದ ರಸ್ತೆಯ ಪಾದಚಾರಿಯ ಮಾರ್ಗಗಳನ್ನು ಸರಿಪಡಿಸಿಕೊಡುವಂತೆ ಕೋರಿದರು. ಈ ಬಗ್ಗೆ ಸೂಕ್ತ ಕ್ರಮ ವಹಿಸುವುದಾಗಿ ಮಾನ್ಯ ನೋಡಲ್ ಅಧಿಕಾರಿಗಳು ವೆಂಕಟೇಶ್ ರವರಿಗೆ ಮೊಬೈಲ್‌ನಲ್ಲಿ ತಿಳಿಸಿದರು.

ನಂತರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರವರ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| ಕಾರ್ಯದರ್ಶಿಗಳು ಹಾಗೂ<br>ಸಹಾಯಕ ಅಭಿಯಂತರರು<br>ವಾರ್ಡ್ -174 ಎ. ಪಿ.ಪುರಂ | ನೋಡಲ್ ಅಧಿಕಾರಿಗಳು<br>ವಾರ್ಡ್ ಸಂಖ್ಯೆ: 174 ಹಾಗೂ<br>ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) |